2147
26-9-16

# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 55 ಅಅವಿ 2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:23/09/2016.

## ಸುತ್ತೋಲೆ

ವಿಷಯ: ಕಾಲೇಜುಗಳಲ್ಲಿ ಮತ್ತು ಹಾಸ್ಟೆಲ್‌ಗಳಲ್ಲಿ ರ್‍ಯಾಗಿಂಗ್ ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮವಹಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 100 ಯುಆರ್‌ಸಿ 2000, ದಿನಾಂಕ:08/08/2000.

*****

ವೃತ್ತಿಪರ ಕಾಲೇಜುಗಳಲ್ಲಿ ಮತ್ತು ಅದಕ್ಕೆ ಹೊಂದಿಕೊಂಡಿರುವ ಹಾಸ್ಟೆಲ್‌ಗಳಲ್ಲಿ ಇತ್ತೀಚೆಗೆ ರ್‍ಯಾಗಿಂಗ್ ಘಟನೆಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಇದನ್ನು ಗಂಭೀರವಾಗಿ ಪರಿಗಣಿಸಿದೆ. ಈ ಅನಿಷ್ಟ ರ್‍ಯಾಗಿಂಗ್ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಇದುವರೆವಿಗೂ ಮುಂಜಾಗರೂಕತಾ ಕ್ರಮಗಳನ್ನು ಕೈಗೊಳ್ಳಲು ಎಲ್ಲಾ ಕಾಲೇಜುಗಳು, ವಿಶ್ವವಿದ್ಯಾಲಯಗಳಿಗೆ ಸುತ್ತೋಲೆಗಳ ಮೂಲಕ ಹಾಗೂ ಪತ್ರಗಳ ಮೂಲಕ ತಿಳಿಸಲಾಗಿದೆ. ಆದರೂ ಸಹ ಈ ರ್‍ಯಾಗಿಂಗ್ ಪಿಡುಗು ರಾಜ್ಯದಲ್ಲಿ ದಿನೇದಿನೇ ಹೆಚ್ಚುಗುತ್ತಿರುವುದನ್ನು ದೃಶ್ಯ ಮಾಧ್ಯಮ ಹಾಗೂ ಪತ್ರಿಕೆಗಳಲ್ಲಿ ನೋಡಬಹುದಾಗಿದೆ. ಈ ರ್‍ಯಾಗಿಂಗ್ ರಾಕ್ಷಸಿ ಕೃತ್ಯವನ್ನು ತಡೆಗಟ್ಟುವ ಸಲುವಾಗಿ ಭಾರತೀಯ ದಂಡ ಸಂಹಿತೆಯಲ್ಲಿ ಹಾಗೂ 1983ರ ಕರ್ನಾಟಕ ಶಿಕ್ಷಣ ಅಧಿನಿಯಮದಲ್ಲಿ ಅಳವಡಿಸಲಾಗಿರುವ ಉಪಬಂಧಗಳನ್ನು ಪೂರಕಗೊಳಿಸಿ ಯಾವುದೇ ರ್‍ಯಾಗಿಂಗ್ ಘಟನೆಗಳು ಜರುಗದಂತೆ ಪರಿಪೂರ್ಣವಾದ ಮುಂಜಾಗರೂಕತಾ ಕ್ರಮವನ್ನು ತೆಗೆದುಕೊಂಡು ಅದನ್ನು ನಿರ್ಮೂಲ ಮಾಡಲು ಮತ್ತು ನವ್ಯವಾಗಿ ಕಾಲೇಜುಗಳಿಗೆ ಪ್ರವೇಶ ಪಡೆದ ಕಿರಿಯ ವಿದ್ಯಾರ್ಥಿಗಳ ಮೇಲೆ ರಾಕ್ಷಸೀ ಕೃತ್ಯವನ್ನು ಹಿರಿಯ ವಿದ್ಯಾರ್ಥಿಗಳು ಎಸಗಿ ಅಂತಹವರುಗಳಿಗೆ ತೀವ್ರಕರವಾದ ಕೃತ್ಯಗಳಲ್ಲಿ ತೊಡಗುವುದನ್ನು ನಿವಾರಿಸಲು ನಿರ್ದಿಷ್ಟವಾದ ಮಾರ್ಗಸೂಚಿಗಳು ಮತ್ತು ಶಿಕ್ಷೆಯನ್ನು ಸಹ ಈ ಹಿಂದೆ ಪ್ರಕಟಗೊಳಿಸಿರುವುದು ಸರಿಯಷ್ಟೆ. ಇಂತಹ ಕೃತ್ಯವನ್ನು ಸಹಿಸಲು ಸಾಧ್ಯವಾಗದಂತಹ ವಿದ್ಯಾರ್ಥಿಗಳು ಅವರ ಜೀವಕ್ಕೆ ಅಪಾಯ ಮಾಡಿಕೊಳ್ಳುತ್ತಾರೆ. ಜೀವನದಲ್ಲಿ ಅನೇಕ ಆಸೆ-ಆಕಾಂಕ್ಷೆಗಳನ್ನು ಹೊಂದಿರುವಂತಹ ನೂತನ ವಿದ್ಯಾರ್ಥಿಯು ತಮ್ಮ ಅಮೂಲ್ಯವಾದ ಜೀವನವನ್ನು ಭೌತಿಕವಾಗಿಯಾಗಲೀ ಅಥವಾ ಮಾನಸಿಕವಾಗಿ ರ್‍ಯಾಗಿಂಗ್ ಪಿಡುಗಿನಿಂದ ಹಾಳು ಮಾಡಿಕೊಳ್ಳುವುದನ್ನು ತಡೆಗಟ್ಟಲು ಅನುವಾಗುವಂತೆ ಪರಿಣಾಮಕಾರಿಯಾದ ಮತ್ತು ಬಲಾಢ್ಯವಾದ ಕ್ರಮಗಳನ್ನು ಜಾರಿಗೊಳಿಸುವಂತೆ ಭಾರತ ಸರ್ಕಾರ, ವಿಶ್ವವಿದ್ಯಾನಿಲಯ ಧನ ಸಹಾಯ ಆಯೋಗ, ಅಖಿಲ ಭಾರತ ತಾಂತ್ರಿಕ ಪರಿಷತ್ತು ಮತ್ತು ಸರ್ವೋಚ್ಚ ನ್ಯಾಯಾಲಯವು ತಮ್ಮ ಆತಂಕವನ್ನು ವ್ಯಕ್ತಪಡಿಸುತ್ತಾ ನಿರ್ದೇಶನವನ್ನು ನೀಡಿವೆ.

ಪುಟ:2ಕ್ಕೆ ಮುಂದುವರೆದಿದೆ...

ಈ ಹಿನ್ನೆಲೆಯಲ್ಲಿ ರ್‍ಯಾಗಿಂಗ್ ಪಿಡುಗನ್ನು ತಡೆಗಟ್ಟುವ ಸಲುವಾಗಿ ಸರ್ಕಾರ ಹೊರಡಿಸಿರುವ ಸುತ್ತೋಲೆ ಸಂಖ್ಯೆ: ಇಡಿ 100 ಯುಆರ್‌ಸಿ 2000, ದಿನಾಂಕ:08/08/2000ರಲ್ಲಿ ತಿಳಿಸಿರುವಂತೆ ಎಲ್ಲಾ ಕಾಲೇಜುಗಳಲ್ಲಿ ಕಟ್ಟುನಿಟ್ಟಿನ ಕ್ರಮಗಳನ್ನು ವಹಿಸಿ, ಕಾಲೇಜುಗಳಲ್ಲಿ ಮತ್ತು ಹಾಸ್ಟೆಲ್‌ಗಳಲ್ಲಿ ರ್‍ಯಾಗಿಂಗ್‌ನ್ನು ತಡೆಗಟ್ಟಲು ಎಲ್ಲಾ ವಿಶ್ವವಿದ್ಯಾಲಯಗಳು, ಸರ್ಕಾರಿ ಕಾಲೇಜುಗಳು, ತಾಂತ್ರಿಕ ಶಿಕ್ಷಣ ಕಾಲೇಜುಗಳಲ್ಲಿ ಕಟ್ಟುನಿಟ್ಟಿನ ಕ್ರಮವಹಿಸಿ ಈ ಬಗ್ಗೆ ವ್ಯಾಪಕ ಪ್ರಚಾರವನ್ನು ನೀಡುವಂತೆ ಮತ್ತೊಮ್ಮೆ ಸೂಚಿಸಿದೆ.

(ಕೆ.ಎಲ್.ಸುಬ್ರಮಣ್ಯ)
**ಸರ್ಕಾರದ ಅಧೀನ ಕಾರ್ಯದರ್ಶಿ,**
**ಉನ್ನತ ಶಿಕ್ಷಣ ಇಲಾಖೆ (ಸಾಮಾನ್ಯ-2)**

## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಶೈವಿ/139/ರ್‍ಯಾಗಿಂಗ್/2009-10

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: /10/2016

ಕಾಲೇಜುಗಳಲ್ಲಿ ಮತ್ತು ಹಾಸ್ಟೆಲ್‌ಗಳಲ್ಲಿ ರ್‍ಯಾಗಿಂಗ್ ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮವಹಿಸುವ ಸಂಬಂಧ, ಹೊರಡಿಸಿರುವ ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ/ 55/ ಅಅವಿ/ 2016 ಬೆಂಗಳೂರು, ದಿನಾಂಕ:23.09.2016 ನ್ನು ಕೆಳಕಂಡವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು**

**ಇವರಿಗೆ:**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ-ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳು ಅಗತ್ಯ ಕ್ರಮಕೈಗೊಳ್ಳಲು ತಿಳಿಸುವಂತೆ ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು, ರವರು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

**ಪ್ರತಿ:**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತಶಾಖೆಗೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001.
2) ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರ ಆಪ್ತ ಶಾಖೆ, ಕೇಂದ್ರ ಕಛೇರಿ, ಬೆಂಗಳೂರು.
3) ಕಛೇರಿ ಪ್ರತಿ